# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೧<br>Part – I | ಬೆಂಗಳೂರು, ಶನಿವಾರ, ೦೬ ಸೆಪ್ಟೆಂಬರ್, ೨೦೨೫ (ಭಾದ್ರಪದ ೧೫, ಶಕವರ್ಷ ೧೯೪೭)<br>BENGALURU, SATURDAY, 06 SEPTEMBER, 2025 (BHADRAPADA 15, SHAKAVARSHA 1947) | ನಂ. ೫೪೧<br>No. 541 |
|---|---|---|

## ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 388 ಸೇನೆನಿ 2024 ಭಾ-3

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ
ಬೆಂಗಳೂರು ದಿನಾಂಕ:04.09.2025

## ಸುತ್ತೋಲೆ

**ವಿಷಯ:** ನೇರ ನೇಮಕಾತಿಗಾಗಿ ಹೊರಡಿಸಿರುವ ಅಧಿಸೂಚನಗಳನ್ನು ರದ್ದುಪಡಿಸುವ ಬಗ್ಗೆ

**ಉಲ್ಲೇಖ:** ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನೆನಿ 2024, ದಿನಾಂಕ: 25.11.2024, 29.03.2025 ಮತ್ತು 11.04.2025

ದಿನಾಂಕ: 04.09.2025 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನದಂತೆ,

'ಉಲ್ಲೇಖಿತ ಸುತ್ತೋಲೆಗಳಲ್ಲಿ ನೀಡಲಾಗಿರುವ ಸೂಚನೆಗಳ ಕಡೆಗೆ ಗಮನಸೆಳೆಯುತ್ತಾ, ದಿನಾಂಕ: 28.10.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನದಂತೆ, ದಿನಾಂಕ: 28.10.2024ರ ನಂತರ ಸರ್ಕಾರದ ಯಾವುದೇ ಇಲಾಖೆ/ಮಂಡಳಿ/ನಿಗಮ/ಸ್ವಾಯತ್ತ ಸಂಸ್ಥೆಗಳ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರಗಳು ಹೊರಡಿಸಿದ ಅಧಿಸೂಚನೆಗಳನ್ನು ರದ್ದುಗೊಳಿಸಿ, ಪರಿಶಿಷ್ಟ ಜಾತಿ ಒಳಮೀಸಲಾತಿಯನ್ನು ಅಳವಡಿಸಿಕೊಂಡು ಕಾಲಬದ್ಧವಾಗಿ (Time Bound) ಹೊಸದಾಗಿ ನೇಮಕಾತಿ ಅಧಿಸೂಚನೆ ಹೊರಡಿಸುವಂತೆ ಸೂಚಿಸಿದೆ.'

ಮುಂದುವರೆದು, ದಿನಾಂಕ: 28.10.2024ರ ಹಿಂದೆ ನೇರ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಿ, ದಿನಾಂಕ: 28.10.2024ರ ನಂತರ ಸರ್ಕಾರದ ಯಾವುದೇ ಇಲಾಖೆ/ಮಂಡಳಿ/ನಿಗಮ/ಸ್ವಾಯತ್ತ ಸಂಸ್ಥೆಗಳ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರಗಳು ಯಾವುದಾದರೂ ತಿದ್ದುಪಡಿ ಅಧಿಸೂಚನೆಗಳನ್ನು ಹೊರಡಿಸಿದ್ದಲ್ಲಿ ಅಂತಹ ಎಲ್ಲಾ ನೇಮಕಾತಿ ಅಧಿಸೂಚನೆಗಳನ್ನೂ ಸಹ ರದ್ದುಗೊಳಿಸಿ, ಪರಿಶಿಷ್ಟ ಜಾತಿ ಒಳ ಮೀಸಲಾತಿಯನ್ನು ಅಳವಡಿಸಿಕೊಂಡು ಹೊಸದಾಗಿ ನೇಮಕಾತಿ ಅಧಿಸೂಚನೆ ಹೊರಡಿಸಬೇಕೆಂದೂ ಸಹ ಹಾಗೂ ಕಾಲಬದ್ಧವಾಗಿ (Time Bound) ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೂಳಿಸಲು ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ /ಆಯ್ಕೆ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ.

(ವೀರಭದ್ರು)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಆಸು ಇಲಾಖೆ (ಸೇವಾ ನಿಯಮಗಳು)

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು



THAMMAIAH

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297